ಕರ್ನಾಟಕ ಸರ್ಕಾರ

ಸಂಖ್ಯೆ: ಕಾಇ 170 ಸ್ವೀಮರ 2020

ಕರ್ನಾಟಕ ಸರ್ಕಾರ ಸಚಿವಾಲಯ
ವಿಕಾಸಸೌಧ
ಬೆಂಗಳೂರು, ದಿನಾಂಕ: 23-04-2020

**ಆದೇಶ**

ವಿಷಯ: ಕೋವಿಡ್-19 ಸಾಂಕ್ರಾಮಿಕ ರೋಗದ ಹಿನ್ನೆಲೆಯಲ್ಲಿ ಕಟ್ಟಡ ಕಾರ್ಮಿಕರಿಗೆ ಮತ್ತು ವಲಸೆ ಕಾರ್ಮಿಕರಿಗೆ ನೆರವು ಒದಗಿಸಲು ಸೂಕ್ತ ಕ್ರಮಗಳನ್ನು ಜರುಗಿಸುವ ಬಗ್ಗೆ.

ಉಲ್ಲೇಖ: ದಿನಾಂಕ: 06-04-2020 ರಂದು ಸರ್ಕಾರದ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ನಡೆದ ಸಭಾ ನಡವಳಿಗಳು.

****

ಕ್ಯಾಪ್ಟನ್ ಮಣಿವಣ್ಣನ್ ಪಿ. ಭಾ.ಆ.ಸೇ., ಸರ್ಕಾರದ ಕಾರ್ಯದರ್ಶಿ, ಕಾರ್ಮಿಕ ಇಲಾಖೆ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಆದ ನಾನು ಸರ್ಕಾರದ ಆದೇಶ ಸಂಖ್ಯೆ: ಕಂಇ 178 ಟಿಎಸ್‌ಆರ್ 2020 ದಿನಾಂಕ: 30-03-2020ರಲ್ಲಿ ವಿಪತ್ತು ನಿರ್ವಹಣೆ ಕಾಯ್ದೆ 2005ರ ಸೆಕ್ಷನ್ 69ರಡಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಕೋವಿಡ್-19ರ ತುರ್ತು ಪರಿಸ್ಥಿತಿ ಹಿನ್ನೆಲೆಯಲ್ಲಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಯೋಗದೊಂದಿಗೆ ವಾರ್ತಾ ಭವನದಲ್ಲಿ ದಾಸೋಹ ಸಹಾಯವಾಣಿಯ ಮೂಲಕ ಸ್ಥಾಪಿಸಲಾದ 155214 ಸಹಾಯವಾಣಿಯ ಮೂಲಕ ಆಹಾರ ವಿತರಣೆಗೆ ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ಈ ಕೆಳಕಂಡಂತೆ ಆದೇಶಿಸುತ್ತಿದ್ದೇನೆ.

1. 155214 ದಾಸೋಹ ಉಚಿತ ಸಹಾಯವಾಣಿಯ <u>ಮೇಲುಸ್ತುವಾರಿಗಾಗಿ</u> ಶ್ರೀ ವಿ.ಎಂ ಗುರುಪ್ರಸಾದ, ಸಹಾಯಕ ಕಾರ್ಮಿಕ ಆಯುಕ್ತರು, ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ ಹಾಗೂ ಶ್ರೀ ಸರ್ವೇಶ್, ಸಮಾಲೋಚಕರು, ಆಶಾದೀಪಯೋಜನೆ ಇವರುಗಳನ್ನು ನೇಮಿಸಿ ಆದೇಶಿಸಿದೆ. ಸದರಿಯವರು ಕಾರ್ಯದರ್ಶಿಗಳು, ಕಾರ್ಮಿಕ ಇಲಾಖೆ ಇವರಿಗೆ ಇದಕ್ಕೆ ಸಂಬಂಧಪಟ್ಟಂತೆ ವರದಿಯನ್ನು ಪ್ರತಿನಿತ್ಯ ಸಲ್ಲಿಸುವುದು.

2. 155214 ಸಹಾಯವಾಣಿಗೆ ಕಟ್ಟಡ ಕಾರ್ಮಿಕರ ಮತ್ತು ವಲಸೆ ಕಾರ್ಮಿಕರ ಮದ್ಯಾಹ್ನದ ಊಟ ಮತ್ತು ರಾತ್ರಿ ಊಟದ ಕರೆಗಳನ್ನು ಸ್ವೀಕರಿಸಲಾಗುತ್ತಿದೆ. ಈ ಕರೆಗಳನ್ನು ಕಟ್ಟಡ ಕಾರ್ಮಿಕರು ಅಥವಾ ಇತರೆ ಕಾರ್ಮಿಕರು ಇದರಲ್ಲಿ ಪಡಿಡತ ಚೀಟಿಯನ್ನು ಹೊಂದಿರುವ ಕಟ್ಟಡ ಕಾರ್ಮಿಕರು ಹಾಗೂ ಹೊಂದಿಲ್ಲದ ಕಾರ್ಮಿಕರ ಕರೆಗಳನ್ನು ವಿಂಗಡಿಸಿ ಹಾಗೂ ಇನ್ನಿತರ ಕರೆಗಳನ್ನು ವಿಂಗಡಿಸಿ, ಕೇವಲ ಕಟ್ಟಡ ಕಾರ್ಮಿಕರಿಗೆ ದಾಸೋಹ ಮೂಲಕ ಆಹಾರವನ್ನು ಒದಗಿಸುವ ವ್ಯವಸ್ಥೆಯನ್ನು ಶೇ.100ರಷ್ಟು ಸುನಿಶ್ಚತಗೊಳಿಸಲು ನಿಯಮಾನುಸಾರ ಅಗತ್ಯ ಕ್ರಮ ಕೈಗೊಳ್ಳಲು ಹಾಗೂ ಸಹಾಯವಾಣಿಯಲ್ಲಿ ಐ.ವಿ.ಆರ್.ಎಸ್. ವ್ಯವಸ್ಥೆಯನ್ನು ಸ್ಥಾಪಿಸಲು ಆದೇಶಿಸಿದೆ.

3. ಸಹಾಯವಾಣಿಯ ಮೇಲುಸ್ತುವಾರಿ ಹೊಂದಿರುವ ಅಧಿಕಾರಿಗಳು, 155214ಗೆ ಸ್ವೀಕೃತವಾಗುವ ಎಲ್ಲಾ ಕರೆಗಳನ್ನು ಶೇ.100ರಷ್ಟು ಸ್ವೀಕೃತವಾಗಿರುವ ಬಗ್ಗೆ ಧೃಡೀಕರಿಸುವುದು. ಸದರಿ ಕರೆಗಳಲ್ಲಿ ಕಟ್ಟಡ ಕಾರ್ಮಿಕರ ಕರೆಗಳಲ್ಲದಿದ್ದಲ್ಲಿ, ಸಹಾಯವಾಣಿಯು ಆಹಾರವನ್ನು ಕಟ್ಟಡ ಕಾರ್ಮಿಕರಿಗೆ ಮಾತ್ರ ಒದಗಿಸಲಾಗುವುದು ಎಂದು ಕರೆ ಮಾಡಿದವರಿಗೆ ತಿಳಿಸುವುದು. ಆಹಾರ ಪೊಟ್ಟಣ ಮತ್ತು ಇತರೆ ಬೇಡಿಕೆ ಕುರಿತು ಕಟ್ಟಡ ಕಾರ್ಮಿಕರಿಂದ ಸ್ವೀಕೃತವಾಗುವ ಕರೆಗಳನ್ನು ಇಂದಿರಾ ಕ್ಯಾಂಟಿನ್‌ಗೆ ವರ್ಗಾಯಿಸಿರುವ ಬಗ್ಗೆ ಖಚಿತಪಡಿಸಿಕೊಳ್ಳುವುದು.

4. ಕರ್ನಾಟಕ ಕಟ್ಟಡ ಮತ್ತು ಇತರ ನಿಮಾಣ ಕಾರ್ಮಿಕರ ಕಲ್ಯಾಣ ಮಂಡಳಿ ಮತ್ತು ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಗಳು ತಮ್ಮ ದೈನಂದಿನ ವೆಚ್ಚದ ವಿವರಗಳನ್ನು ಇಲಾಖೆಯ ಅಧಿಕೃತ ವೆಬ್‌ಸೈಟಿನಲ್ಲಿ ಪ್ರತಿದಿನ ಸಂಜೆ 6.00 ಗಂಟೆಯೊಳಗೆ upload ಮಾಡುವುದು.

5. ಕಾರ್ಮಿಕ ಇಲಾಖೆಯಿಂದ ಹೊರಡಿಸಲಾಗುವ ಎಲ್ಲಾ ಆದೇಶ/ಸುತ್ತೋಲೆ/ಅಧಿಸೂಚನೆ ಇತ್ಯಾದಿಗಳನ್ನು ಶ್ರೀ ಶೈಲೇಶ್ ರವರು ಇಲಾಖೆಯ ಅಧಿಕೃತ ಜಾಲತಾಣದಲ್ಲಿ ಪ್ರಕಟಿಸುವ ಜವಬ್ದಾರಿಯನ್ನು ಹೊಂದಿರುತ್ತಾರೆ.

(ಕ್ಯಾಪ್ಟನ್ ಮಣಿವಣ್ಣನ್ ಪಿ.)
ಸರ್ಕಾರದ ಕಾರ್ಯದರ್ಶಿ
ಕಾರ್ಮಿಕ ಇಲಾಖೆ ಹಾಗೂ ವಾರ್ತಾ ಮತ್ತು
ಸಾರ್ವಜನಿಕ ಸಂಪರ್ಕ ಇಲಾಖೆ.

ಇವರಿಗೆ,

1. ಕಾರ್ಮಿಕ ಆಯುಕ್ತರು, ಕಾರ್ಮಿಕ ಭವನ, ಬನ್ನೇರುಘಟ್ಟ ರಸ್ತೆ, ಬೆಂಗಳೂರು.
2. ಶ್ರೀಮತಿ ವಿ. ಚೈತ್ರ, ಭಾ.ಆ.ಸೇ., ವಿಶೇಷ ನೋಡಲ್ ಅಧಿಕಾರಿ, (ಕೋವಿಡ್-19) ಕಾರ್ಮಿಕ ಇಲಾಖೆ, ಬೆಂಗಳೂರು.
3. ಕಾರ್ಯದರ್ಶಿ, ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ, ಕಾರ್ಮಿಕ ಭವನ, ಬನ್ನೇರುಘಟ್ಟ ರಸ್ತೆ, ಬೆಂಗಳೂರು.
4. ನಿರ್ದೇಶಕರು, ಕಾರ್ಖಾನೆಗಳು, ಬಾಯ್ಲರುಗಳು, ಕೈಗಾರಿಕೆ ಸುರಕ್ಷತೆ ಮತ್ತು ಸ್ವಾಸ್ಥ್ಯ ಇಲಾಖೆ, ಕಾರ್ಮಿಕ ಭವನ, ಬೆಂಗಳೂರು.
5. ಅಪರ ಕಾರ್ಮಿಕ ಆಯುಕ್ತರು (ಆಡಳಿತ ಮತ್ತು ಲೆಕ್ಕಪತ್ರ), ಕಾರ್ಮಿಕ ಭವನ, ಬೆಂಗಳೂರು.
6. ಅಪರ ಕಾರ್ಮಿಕ ಆಯುಕ್ತರು (ಕೈಗಾರಿಕಾ ಬಾಂದವ್ಯ) ಕಾರ್ಮಿಕ ಭವನ, ಬೆಂಗಳೂರು.
7. ಜಂಟಿ ಕಾರ್ಯದರ್ಶಿಗಳು, ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ, ಕಲ್ಯಾಣ ಸುರಕ್ಷಾ ಭವನ, 3ನೇ ಮಹಡಿ, ಐಟಿಐ ಆವರಣ, ಡೈರಿ ಸರ್ಕಲ್, ಬೆಂಗಳೂರು-29.
8. ಕಲ್ಯಾಣ ಆಯುಕ್ತರು, ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿ, ಕಾರ್ಮಿಕ ಕಲ್ಯಾಣ ಭವನ, ನಂ. 48, 2ನೇ ಮಹಡಿ, ಮತ್ತಿಕೆರೆ ಮುಖ್ಯ ರಸ್ತೆ, (ಆರ್.ಟಿ.ಓ. ಹತ್ತಿರ), ಯಶವಂತಪುರ, ಬೆಂಗಳೂರು.
9. ಎಲ್ಲಾ ಜಂಟಿ/ಉಪ ಕಾರ್ಮಿಕ ಆಯುಕ್ತರು/ಸಹಾಯಕ ಕಾರ್ಮಿಕ ಆಯುಕ್ತರು/ಕಾರ್ಮಿಕ ಅಧಿಕಾರಿಗಳು/ ಹಿರಿಯ ಕಾರ್ಮಿಕ ನಿರೀಕ್ಷಕರು/ಕಾರ್ಮಿಕ ನಿರೀಕ್ಷಕರು (ಕಾರ್ಮಿಕ ಆಯುಕ್ತಾಲಯದ ಮೂಲಕ)

ಪ್ರತಿಯನ್ನು ಮಾಹಿತಿಗಾಗಿ:

1. ಮಾನ್ಯ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2. ಮಾನ್ಯ ಇಲಾಖಾ ಸಚಿವರ ಆಪ್ತ ಕಾರ್ಯದರ್ಶಿ, ಕಾರ್ಮಿಕ ಇಲಾಖೆ, ವಿಕಾಸಸೌಧ, ಬೆಂಗಳೂರು.
3. ಸರ್ಕಾರದ ಕಾರ್ಯದರ್ಶಿ ರವರ ಆಪ್ತ ಕಾರ್ಯದರ್ಶಿ, ಕಾರ್ಮಿಕ ಇಲಾಖೆ ವಿಕಾಸ ಸೌಧ, ಬೆಂಗಳೂರು
4. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.